**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ರಾಜೇಂದ್ರ ರಾಜಣ್ಣ ರವರು ನಿಯಮ 72ರ ಅಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ**

**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ರಾಜೇಂದ್ರ ರಾಜಣ್ಣ ಇವರು ಬಯಲು ಸೀಮೆಯ ಏಳು ಜಿಲ್ಲೆಗಳಿಗೆ ಕುಡಿಯುವ ನೀರನ್ನು ಪೂರೈಸುವ ಉದ್ದೇಶದಿಂದ ರಾಜ್ಯ ಸರ್ಕಾರವು ಎತ್ತಿನಹೊಳೆ ಯೋಜನೆಯನ್ನು ಜಾರಿಗೆ ತಂದಿದ್ದು, ಈ ನಿಟ್ಟಿನಲ್ಲಿ ಸದರಿ ಯೋಜನೆಯ ಕಾಮಗಾರಿಗಳಿಗೆ ಅನುದಾನವು ಲಭ್ಯವಿಲ್ಲದ ಕಾರಣ ಈ ಯೋಜನೆಯ ಅಭಿವೃದ್ಧಿ ಕಾಮಗಾರಿಗಳು ಸ್ಥಗಿತಗೊಂಡಿರುವ ಬಗ್ಗೆ ನಿಯಮ 72 ರಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಜಲಸಂಪನ್ಮೂಲ ಸಚಿವರ ಉತ್ತರ.**

ಕುಡಿಯುವ ನೀರಿನ ತೀವ್ರ ಅಭಾವ ಎದುರಿಸುತ್ತಿರುವ ರಾಜ್ಯದ ಹಾಸನ, ಚಿಕ್ಕಮಗಳೂರು, ತುಮಕೂರು, ಬೆಂಗಳೂರು ಗ್ರಾಮಾಂತರ, ರಾಮನಗರ, ಚಿಕ್ಕಬಳ್ಳಾಪುರ ಹಾಗೂ ಕೋಲಾರ ಜಿಲ್ಲೆಗಳಿಗೆ 24.01 ಟಿ.ಎಂ.ಸಿ ನೀರನ್ನು ಬಳಸಿಕೊಂಡು ಸುರಕ್ಷಿತ ಕುಡಿಯುವ ನೀರು ಒದಗಿಸುವ ಹಾಗೂ ಅಂತರ್ಜಲ ಮರುಪೂರಣಕ್ಕಾಗಿ ಈ ಭಾಗಗಳಲ್ಲಿನ ಸುಮಾರು 527 ಸಣ್ಣ ನೀರಾವರಿ ಕೆರೆಗಳಿಗೆ ನೀರು ತುಂಬಿಸುವ ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ರೂ.12,912.36 ಕೋಟಿ ಮೊತ್ತದ ಪರಿಷ್ಕೃತ ಯೋಜನಾ ವರದಿಗೆ ದಿನಾಂಕ:17/2/2014 ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ.

ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯನ್ನು 02 ಹಂತಗಳಲ್ಲಿ ಕೈಗೆತ್ತಿಕೊಳ್ಳಲಾಗಿರುತ್ತದೆ. ಸದರಿ ಯೋಜನೆಯ ಪ್ರಸ್ತುತ ಹಂತದ ವಿವರಗಳು ಕೆಳಗಿನಂತಿವೆ:

- ಈ ಯೋಜನೆಯ ಮೊದಲನೇ ಹಂತದ ಲಿಫ್ಟ್ ಕಾಮಗಾರಿಗಳನ್ನು ಐದು ಪ್ಯಾಕೇಜ್‌ಗಳಲ್ಲಿ ಮಾರ್ಚ್ 2014 ರಲ್ಲಿ ಕೈಗೆತ್ತಿಕೊಳ್ಳಲಾಗಿದ್ದು, ಅರಣ್ಯ ಭೂಮಿಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದ ಅರಣ್ಯ ಮತ್ತು ಪರಿಸರ ಇಲಾಖೆಯಿಂದ ಹಂತ-2(Stage-2 clearance)ಕ್ಕೆ ದಿನಾಂಕ: 15.09.2018 ರಂದು ತೀರುವಳಿ ಪಡೆದು ಕಾಮಗಾರಿಗಳ ತೀವ್ರ ಅನುಷ್ಠಾನಕ್ಕೆ ಚಾಲನೆ ನೀಡಲಾಗಿದೆ. ಅಲ್ಲದೆ, ಯೋಜನೆಯ ಮೊದಲನೇ ಹಂತದ ಕಾಮಗಾರಿಗಳಿಗೆ ಅವಶ್ಯವಿರುವ 219.44 ಮೆ.ವ್ಯಾ ವಿದ್ಯುತ್‌ಚ್ಛಕ್ತಿ ಪೂರೈಸುವ ಸಬ್‌ಸ್ಟೇಶನ್ ನಿರ್ಮಾಣದ ಕಾಮಗಾರಿ ಮತ್ತು ಟ್ರಾನ್ಸ್‌ಮಿಷನ್ ಲೈನ್ ನಿರ್ಮಾಣ ಕಾಮಗಾರಿಗಳನ್ನು ಎರಡು ಪ್ಯಾಕೇಜಗಳಲ್ಲಿ 2017-18 ರಲ್ಲಿ ಕೈಗೆತ್ತಿಕೊಂಡಿದ್ದು, ಪ್ರಸ್ತುತ, ಮೊದಲನೇ ಹಂತದ ಕಾಮಗಾರಿಗಳು ಬಹುತೇಕ ಪೂರ್ಣಗೊಳ್ಳುವ ಹಂತದಲ್ಲಿರುತ್ತವೆ.
- ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಹಂತ-2 ರಡಿಯ 260 ಕಿ.ಮೀ ಉದ್ದದ ಗುರುತ್ವ ಕಾಲುವೆ, ಭೈರಗೊಂಡ್ಲು ಜಲಾಶಯದ ಕಾಮಗಾರಿ ಮತ್ತು ಭೈರಗೊಂಡ್ಲು ಜಲಾಶಯದ ವರೆಗಿನ ಫೀಡರ್ ಕಾಲುವೆ ಕಾಮಗಾರಿಗಳನ್ನು 35 ಪ್ಯಾಕೇಜಗಳಲ್ಲಿ 2017-18 ರಿಂದ 2019-20 ರವರೆಗೆ ಕ್ರಮೇಣ ಕೈಗೆತ್ತಿಕೊಂಡಿದ್ದು, ಈಗಾಗಲೇ ಗುರುತ್ವ ಕಾಲುವೆಯ ಸುಮಾರು 100 ಕಿ.ಮಿ ಉದ್ದದ ಕಾಲುವೆ ಕಾಮಗಾರಿಯು ಪೂರ್ಣಗೊಂಡಿದ್ದು, ಬಾಕಿ ಕಾಮಗಾರಿಗಳು ವಿವಿದ ಹಂತದ ಪ್ರಗತಿಯಲ್ಲಿವೆ.
- ಭೈರಗೊಂಡ್ಲು ಜಲಾಶಯಕ್ಕಿಂತ ಮೊದಲು ಕವಲೊಡೆಯುವ ಬೆಂಗಳೂರು ಗ್ರಾಮಾಂತರ ಜಿಲ್ಲೆ ಮತ್ತು ರಾಮನಗರ ಜಿಲ್ಲೆಗಳಿಗೆ ಕುಡಿಯುವ ನೀರನ್ನು ಒದಗಿಸುವ ಹಾಗೂ ನೆಲಮಂಗಲ ತಾಲ್ಲೂಕಿನ 2 ಕೆರೆಗಳನ್ನು ತುಂಬಿಸುವ ರಾಮನಗರ ಫೀಡರ್ ಕಾಲುವೆ ಕಾಮಗಾರಿ, ತುಮಕೂರು, ಕೊರಟಗೆರೆ, ಮಧುಗಿರಿ ಮತ್ತು ಪಾವಗಡ ತಾಲ್ಲೂಕುಗಳಿಗೆ ಕುಡಿಯುವ ನೀರು ಮತ್ತು ಈ ಭಾಗದ 79 ಸಣ್ಣ ನೀರಾವರಿ ಕೆರೆಗಳಿಗೆ ನೀರನ್ನು ಒದಗಿಸುವ ಮಧುಗಿರಿ ಫೀಡರ್ ಕಾಲುವೆ ಕಾಮಗಾರಿ (2 ಪ್ಯಾಕೇಜ್‌ಗಳಲ್ಲಿ) ಮತ್ತು ಗೌರಿಬಿದನೂರು ತಾಲ್ಲೂಕಿಗೆ ಕುಡಿಯುವ ನೀರಿಗಾಗಿ ಮತ್ತು ಗೌರಿಬಿದನೂರು, ಕೊರಟಗೆರೆ, ಮಧುಗಿರಿ ಮತ್ತು ದೊಡ್ಡಬಳ್ಳಾಪುರ ತಾಲ್ಲೂಕುಗಳ 107 ಸಣ್ಣ ನೀರಾವರಿ ಕೆರೆಗಳಿಗೆ ನೀರನ್ನು ಒದಗಿಸುವ ಗೌರಿಬಿದನೂರು ಫೀಡರ್ ಕಾಲುವೆ ಕಾಮಗಾರಿಗಳು ವಿವಿಧ ಹಂತದ ಪ್ರಗತಿಯಲ್ಲಿರುತ್ತವೆ.
- ಭೈರಗೊಂಡ್ಲು ನಿರ್ಮಾಣ ಜಲಾಶಯ ಕಾಮಗಾರಿಯನ್ನು ಟೆಂಡರ್ ಆಧಾರದ ಮೇಲೆ ಗುತ್ತಿಗೆದಾರರಿಗೆ ವಹಿಸಲಾಗಿದ್ದು, ಭೂಸ್ವಾಧೀನ ಪ್ರಕ್ರಿಯೆಯನ್ನು ಕೈಗೊಳ್ಳುವ ಸಂದರ್ಭದಲ್ಲಿ ಕೊರಟಗೆರೆ ತಾಲ್ಲೂಕಿನ ರೈತರು ದೊಡ್ಡಬಳ್ಳಾಪುರ ತಾಲ್ಲೂಕಿನ ರೈತರಿಗೆ ನೀಡುವ ಪರಿಹಾರ ದರದಂತೆ ಅವರಿಗೂ ಸಹ ಏಕ ರೂಪದರ ನೀಡಲು ಒತ್ತಾಯಿಸಿದ್ದರಿಂದ ಕಾಮಗಾರಿಗಳಿಗೆ ಅಡೆತಡೆ ಉಂಟಾಗಿರುತ್ತದೆ.

- ಭೈರಗೊಂಡ್ಲು ಜಲಾಶಯ ನಂತರದ ಲಿಫ್ಟ್ ಮತ್ತು ಫೀಡರ್ ಕಾಲುವೆ ಕಾಮಗಾರಿಗಳ ಮುಖಾಂತರ ಬೆಂಗಳೂರು ಗ್ರಾಮಾಂತರ, ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಕುಡಿಯುವ ನೀರು ಪೂರೈಸಲು ಮತ್ತು ಕೆರೆ ತುಂಬಿಸಲು ಅನುಮೋದಿತ ಯೋಜನಾ ವರದಿಯಲ್ಲಿ ಅವಕಾಶ ಕಲ್ಪಿಸಲಾಗಿದ್ದು, ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯಿಂದ ಮಾತ್ರ ಈ ಪ್ರದೇಶಗಳಿಗೆ ಸುರಕ್ಷಿತ ಕುಡಿಯುವ ನೀರನ್ನು ಪೂರೈಸಲು ಸಾಧ್ಯವಿದ್ದು, ಈ ಕಾಮಗಾರಿಗಳನ್ನು ಕೂಡಲೇ ಕೈಗೆತ್ತಿಕೊಳ್ಳಲು ಸದರಿ ಜಿಲ್ಲೆಗಳ ಜನಪ್ರತಿನಿಧಿಗಳು ತೀವ್ರವಾಗಿ ಒತ್ತಾಯಿಸುತ್ತಿರುವುದರಿಂದ ಸುಮಾರು 2.00 ಟಿ.ಎಂ.ಸಿ ಸಂಗ್ರಹಣಾ ಸಾಮರ್ಥ್ಯದ ಸಮತೋಲನ ಜಲಾಶಯ ನಿರ್ಮಾಣದ ಪರ್ಯಾಯ ಪ್ರಸ್ತಾವನೆಯೊಂದನ್ನು ತಯಾರಿಸಲಾಗಿದ್ದು, ಸದರಿ ಪರ್ಯಾಯ ಪ್ರಸ್ತಾವನೆಯನ್ನು ಒಳಗೊಂಡ ರೂ.23,251.66 ಕೋಟಿ ಮೊತ್ತದ ಪುನರ್ ಪರಿಷ್ಕೃತ ಯೋಜನಾ ವರದಿಯನ್ನು ನಿಗಮದ ನಿರ್ದೇಶಕರ ಮಂಡಳಿಯ ಅನುಮೋದನೆ ಮತ್ತು ಶಿಫಾರಸ್ಸಿನ ಮೇರೆಗೆ ಆರ್ಥಿಕ ಇಲಾಖೆಗೆ ಕಳುಹಿಸಲಾಗಿ, ಆರ್ಥಿಕ ಇಲಾಖೆಯು ಕೆಲವು ಮಾಹಿತಿಗಳನ್ನು/ ಸ್ಪಷ್ಟೀಕರಣವನ್ನು ಕೋರಿದ್ದು, ಪರಿಶೀಲನೆಯಲ್ಲಿರುತ್ತದೆ.
- ಜಲಾಶಯ ನಿರ್ಮಾಣದ ಪರ್ಯಾಯ ಪ್ರಸ್ತಾವನೆಯ ಅನುಸಾರ ಭೈರಗೊಂಡ್ಲು ಜಲಾಶಯದ ನಂತರದ ಲಿಫ್ಟ್ ಕಾಂಪೋನೆಂಟ್ ಕಾಮಗಾರಿಗಳ ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿದ್ದು, ಸದರಿ ಪರ್ಯಾಯ ಪ್ರಸ್ತಾವನೆ ಒಳಗೊಂಡ ಎತ್ತಿನಹೊಳೆ ಯೋಜನೆಯ ಪುನರ್ ಪರಿಷ್ಕೃತ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೊದನೆ ಪಡೆದುಕೊಂಡು ಜಲಾಶಯ ನಿರ್ಮಾಣ ಮತ್ತು ಜಲಾಶಯದ ನಂತರದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ನಿಯಮಾನುಸಾರ ಕ್ರಮ ಜರುಗಿಸಲಾಗುವುದು.
- ಭೈರಗೊಂಡ್ಲು ಜಲಾಶಯದಿಂದ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ನೀರೊದಗಿಸುವ ಕೋಲಾರ ಮತ್ತು ಶ್ರೀನಿವಾಸಪುರ ಫೀಡರ್ ಕಾಲುವೆ ಕಾಮಗಾರಿಗಳ ಅಂದಾಜು ಪಟ್ಟಿಗಳು ತಯಾರಿಕಾ ಹಂತದಲ್ಲಿವೆ.

ಭೂಸ್ವಾಧೀನ ಸಮಸ್ಯೆಗಳು, ಪರಿಸರ ಹಾಗೂ ಅರಣ್ಯ ತೀರುವಳಿ, ರಾಷ್ಟ್ರೀಯ ಹಸಿರು ನ್ಯಾಯಾಧೀಕರಣದಲ್ಲಿ ದಾಖಲಾದ ದಾವೆಗಳು, ರೈಲ್ವೆ, ರಾಷ್ಟ್ರೀಯ ಹೆದ್ದಾರಿ, ಪೆಟ್ರೋನೆಟ್ ಮತ್ತು ಗೇಲ್ ಕ್ರಾಸಿಂಗ್ ಕಾಮಗಾರಿಗಳ ಅನುಷ್ಠಾನಕ್ಕೆ ಸದರಿ ಇಲಾಖೆಗಳಿಂದ ಅನುಮೋದನೆ/ತೀರುವಳಿ, ಯೋಜನೆಗೆ ಅಗತ್ಯವಿರುವ ವಿದ್ಯುಚ್ಛಕ್ತಿಗೆ ವಿದ್ಯುತ್ ಇಲಾಖೆಯಿಂದ ಅನುಮತಿ, ಯೋಜನೆಯ ಕಾಮಗಾರಿಗಳಿಗೆ ಅಗತ್ಯ ವಾರ್ಷಿಕ ಆರ್ಥಿಕ ಸಂಪನ್ಮೂಲಗಳ ಲಭ್ಯತೆಯ ಕೊರತೆ ಮತ್ತು ಕೋವಿಡ್-19 ಮಹಾಮಾರಿಯ ಅವಧಿಯಲ್ಲಿ ಘೋಷಿಸಲಾದ ಲಾಕ್‌ಡೌನ್‌ನಿಂದ ಉಂಟಾದ ಕಾಲವ್ಯಯ, ಈ ಎಲ್ಲಾ ಅಂಶಗಳಿಂದ ಸದರಿ ಯೋಜನೆಯ ವ್ಯಾಪ್ತಿಯಲ್ಲಿನ ಕಾಮಗಾರಿಗಳ ಅನುಷ್ಠಾನದಲ್ಲಿ ವಿಳಂಬವಾಗಿರುತ್ತದೆ.

ಈ ಮೇಲಿನ ಎಲ್ಲಾ ಅಡೆತಡೆಗಳನ್ನು ನಿವಾರಿಸಿಕೊಳ್ಳುತ್ತಾ, ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಸದರಿ ಯೋಜನೆಯಡಿ ಪ್ರಗತಿಯಲ್ಲಿರುವ ಕಾಮಗಾರಿಗಳಿಗಾಗಿ ಬಿಡುಗಡೆ ಮಾಡುತ್ತಿರುವ ವಾರ್ಷಿಕ ಅನುದಾನಕ್ಕೆ ಅನುಗುಣವಾಗಿ ಕಾಮಗಾರಿಗಳನ್ನು ಕೈಗೆತ್ತಿಕೊಂಡು ವೆಚ್ಚ ಮಾಡಲಾಗುತ್ತಿದ್ದು, ಯೋಜನೆಯ ಪ್ರಾರಂಭದಿಂದ ಜನವರಿ 2022 ರ ಅಂತ್ಯದವರಗೆ ಒಟ್ಟಾರೆ ರೂ.9268.76 ಕೋಟಿಗಳ ಸಂಚಿತ ವೆಚ್ಚ ಮಾಡಲಾಗಿರುತ್ತದೆ.

**ಸಂಖ್ಯೆ: ಜಸಂಇ 22 ಡಬ್ಲ್ಯೂಎಲ್ಎ 2022**

(ಗೋವಿಂದ ಎಂ. ಕಾರಜೋಳ)
ಜಲಸಂಪನ್ಮೂಲ ಸಚಿವರು